ಸಾರ್ವಜನಿಕ ಶಿಕ್ಷಣ ಇಲಾಖೆ
**ಕರ್ನಾಟಕ ಶಾಲಾ ಗುಣಮಟ್ಟ ಮೌಲ್ಯಾಂಕನ ಮತ್ತು ಅಂಗೀಕರಣ ಪರಿಷತ್ತು**
**Karnataka School Quality Assessment & Accreditation Council**
**ಕೆ.ಎಸ್.ಇ.ಇ.ಬಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–03. ದೂರವಾಣಿ ಸಂಖ್ಯೆ: 23341615, 23562283, 29720300**
**e-mail: ksqaacbangalore@gmail.com & ksqaacntsenmms@gmail.com**

ಸಂಖ್ಯೆ: ಕೆ3/ NTSE-NMMS ಪ/ಅರ್ಜಿ/ಅನು/46/2020–21 ದಿನಾಂಕ: 08.12.2020

**ಜ್ಞಾಪನ**

ವಿಷಯ:– ದಿನಾಂಕ: 25.01.2021 ರಂದು ನಡೆಯುವ NTS-NMMS ಪರೀಕ್ಷೆಗಳಿಗೆ ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ ಪಟ್ಟಿಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ:–
1. ಈ ಕಛೇರಿ ಸುತ್ತೋಲೆ ಸಮಸಂಖ್ಯೆ, ದಿನಾಂಕ: 9.11.2020
2. ಈ ಕಛೇರಿ ಪತ್ರ ಸಮಸಂಖ್ಯೆ ದಿನಾಂಕ: 02.12.2020
3. NCERTರವರ ಪತ್ರ ಸಂಖ್ಯೆ: Fno. 1-15/2020-21/ESD/NTS-I, ದಿನಾಂಕ: 02.12.2020

~*~*~*~

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರಲ್ಲಿ 2020–21ನೇ ಸಾಲಿನ NTS-NMMS ಪರೀಕ್ಷೆಗಳನ್ನು ದಿನಾಂಕ: 24.01.2021 ರಂದು ನಡೆಸುವುದಾಗಿ ಹಾಗೂ ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ತಾಲ್ಲೂಕು ಕೇಂದ್ರಗಳಲ್ಲಿ NTS ಮತ್ತು NMMS ಪರೀಕ್ಷೆಗಳಿಗೆ ಪ್ರತ್ಯೇಕವಾಗಿ ಸೂಕ್ತ ಸೌಲಭ್ಯಗಳನ್ನು ಹೊಂದಿರುವ ತಲಾ 5 ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ ರಾಜ್ಯ ಕಛೇರಿಗೆ ಸಲ್ಲಿಸುವಂತೆ ಉಲ್ಲೇಖ (2) ರಲ್ಲಿ ತಿಳಿಸಲಾಗಿತ್ತು.

ಆದರೆ ದಿನಾಂಕ: 24.01.2021 ರಂದು ಕೆ.ಪಿ.ಎಸ್.ಸಿ ವತಿಯಿಂದ ವಿವಿಧ ಹುದ್ದೆಗಳ ನೇಮಕಾತಿಗಾಗಿ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯುತ್ತಿರುವುದರಿಂದ ಪರೀಕ್ಷಾ ಕೇಂದ್ರಗಳ ಕೊರತೆಯಿರುವ ಬಗ್ಗೆ ವಿವಿಧ ಜಿಲ್ಲೆಗಳ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಈ ಕಛೇರಿಗೆ ಪತ್ರ ಬರೆದಿರುತ್ತಾರೆ. ಈ ಸಂಬಂಧ ಉಲ್ಲೇಖ (3) ರ NCERT ರವರ ಪತ್ರದನ್ವಯ NTS-NMMS ಪರೀಕ್ಷೆಗಳನ್ನು ದಿನಾಂಕ 24.01.2021 ರ ಬದಲಾಗಿ **ದಿನಾಂಕ: 25.01.2021 ರಂದು** ನಡೆಸಲು ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಅನುಮತಿ ಪಡೆಯಲಾಗಿದೆ. ಇನ್ನುಳಿದಂತೆ ಪರೀಕ್ಷಾ ಕಾರ್ಯ ಚಟುವಟಿಕೆಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.

ಮುಂದುವರೆದು, ಉಲ್ಲೇಖ (2) ರ ಈ ಕಛೇರಿ ಪತ್ರದಲ್ಲಿ ತಿಳಿಸಿದಂತೆ ತಾಲ್ಲೂಕು ಕೇಂದ್ರಗಳಲ್ಲಿ NTS ಮತ್ತು NMMS ಪರೀಕ್ಷೆಗಳಿಗೆ ಪ್ರತ್ಯೇಕವಾಗಿ ತಲಾ 5 ಪರೀಕ್ಷಾ ಕೇಂದ್ರಗಳನ್ನು (ಕನಿಷ್ಠ 10 ಕ್ಕಿಂತ ಹೆಚ್ಚು ಕೊಠಡಿಗಳಿರುವ) ಗುರುತಿಸಿ ಈ ಪತ್ರದ ಜೊತೆಯಲ್ಲಿ ಲಗತ್ತಿಸಲಾದ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ ಜಿಲ್ಲಾ ಹಂತದಲ್ಲಿ ಕ್ರೋಢೀಕರಿಸಿ, ಸಾಫ್ಟ್ ಪ್ರತಿ (Excel sheet) ಯನ್ನು **ದಿನಾಂಕ: 14.12.2020** ರ ಒಳಗೆ ಇ–ಮೇಲ್ (ksqaacbangalore@gmail.com) ಮೂಲಕ ಈ ಕಛೇರಿಗೆ ತಪ್ಪದೇ ಕಳುಹಿಸಲು ತಿಳಿಸಿದೆ.

**ಸೂಚನೆ: ವಿದ್ಯಾರ್ಥಿಗಳು/ಪೋಷಕರು ಪರೀಕ್ಷಾ ಕೇಂದ್ರವನ್ನು ಗುರುತಿಸಲು ಅನುಕೂಲವಾಗುವಂತೆ ಪರೀಕ್ಷಾ ಕೇಂದ್ರದ ಸಂಪೂರ್ಣ ಅಂಚೆ ವಿಳಾಸವನ್ನು ಕಡ್ಡಾಯವಾಗಿ ನಮೂದಿಸುವುದು.**

8/12/20
ಕಾರ್ಯನಿರ್ವಾಹಕ ನಿರ್ದೇಶಕರು
ಕೆ.ಎಸ್.ಕ್ಯು.ಎ.ಎ.ಸಿ

**ಪ್ರತಿಯನ್ನು,**
1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ), ರವರಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
4. NTS ಮತ್ತು NMMS ಪರೀಕ್ಷೆಗಳ ನೋಡಲ್ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
5. ಕಛೇರಿ ಪ್ರತಿ.